(ಇಂದು ದಿನಾಂಕಃ 11-09-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.)

<u>ಮುಖ್ಯ ವಿಚಾರಣೆ : ಶ್ರೀ ಎಸ್.ಎ.ಪಿ.ಅರ್ಜಿದಾರ ಪರ ವಕೀಲರಿಂದಃ</u>

1. ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಂತಹ ವಿಷಯಗಳು ಸರಿಯಾಗಿವೆ. ಅದನ್ನು ನಾನೇ ಹೇಳಿ ಬರೆಸಿದ್ದೇನೆ.

2. ಅಸಲು ದಾವಾ ನಂ. 07/2019 ರ ಆದೇಶ ಪುಟದ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-1 ಎಂದು ಗುರುತಿಸಲಾಯಿತು. ಅಸಲು ದಾವಾ ನಂ. 07/2019 ರ ತೀರ್ಪು ಮತ್ತು ಡಿಕ್ರಿಯ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-2 ಮತ್ತು ನಿ.ಪಿ-3 ಎಂದು ಗುರುತಿಸಲಾಯಿತು. ದಿಃ 05-06-2017 ರ ಕ್ರಯದ ಕರಾರು ಪತ್ರದ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-4 ಎಂದು ಗುರುತಿಸಲಾಯಿತು. ಲೀಗಲ್ ನೋಟಿಸ್ಸಿನ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-5 ಎಂದು ಗುರುತಿಸಲಾಯಿತು. ಅಂಚೆ ಸ್ವೀಕ್ರತಿ ಹಾಜರುಪಡಿಸಿದ್ದು ಅದನ್ನು ನಿ.ಪಿ-6 ಎಂದು ಗುರುತಿಸಲಾಯಿತು. ಒಪ್ಪಂದ ಪತ್ರದ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-7 ಎಂದು ಗುರುತಿಸಲಾಯಿತು. ಬೇಲಿಫ ವರದಿ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-8 ಎಂದು ಗುರುತಿಸಲಾಯಿತು. ಅಸಲು ದಾವಾ ನಂ. 07/2019 ರ ವಾದ ಪತ್ರದ ದೃಢಿಕೃತ ನಕಲನ್ನು ಹಾಜರುಪಡಿಸಿದ್ದುಅದನ್ನು ನಿ.ಪಿ-9 ಎಂದು ಗುರುತಿಸಲಾಯಿತು. ಇಪಿ ನಂಬರ 60/2022 ರ ಅರ್ಜಿಯ ದೃಢಿಕೃತ ನಕಲನ್ನುಹಾಜರುಪಡಿಸಿದ್ದು ನಿ.ಪಿ-10 ಎಂದು ಗುರುತಿಸಲಾಯಿತು. ಇಪಿ ನಂಬರ 60/2022 ರ ಬೇಲಿಫ ವರದಿಯ ದೃಢಿಕೃತ ನಕಲನ್ನುಹಾಜರುಪಡಿಸಿದ್ದು ನಿ.ಪಿ-11 ಎಂದು ಗುರುತಿಸಲಾಯಿತು.

<u>ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು ಸಮಯ ನೀಡಲಾಯಿತು.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಜೆ.ಎಮ್. ಎಫ್. ಸಿ, ಚಿಂಚೋಳಿ.